# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 778 (925) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19.08.2025 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲ್ಲೂಕಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಹತ್ತಿರ ಕೈಗಾರಿಕಾ ಪ್ರದೇಶ ಸ್ಥಾಪಿಸಲು ಸುಮಾರು 1,777 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಅಧಿಸೂಚನೆ ಹೊರಡಿಸಿದ್ದು, ಭೂ-ಮಾಲೀಕರಿಂದ ಭಾರಿ ವಿರೋಧ ನಂತರ ಈಗ ಈ ಪ್ರಸ್ತಾವನೆಯನ್ನು ಸರ್ಕಾರ ಕೈಬಿಟ್ಟಿದ್ದು ಈ ಭಾಗದ ಎಷ್ಟು ಭೂ-ಮಾಲೀಕರು ಸ್ವಯಂ ಪ್ರೇರಿತವಾಗಿ ಭೂಮಿ ನೀಡಲು ಮುಂದಾಗಿರುತ್ತಾರೆ; | ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ಚನ್ನರಾಯಪಟ್ಟಣ ಹೋಬಳಿ, ಮಲ್ಲೇಪುರ, ಚನ್ನರಾಯಪಟ್ಟಣ, ಪಾಳ್ಯ, ನಲ್ಲೂರು, ಮುದ್ದೇನಹಳ್ಳಿ, ನಲ್ಲಪ್ಪನಹಳ್ಳಿ, ಹರಳೂರು, ಪೋಲನಹಳ್ಳಿ, ಚೀ.ಮಾಚನಹಳ್ಳಿ, ಮಟ್ಟಿಬಾರ್ಲು, ಗೋಕರೆಬಚೇನಹಳ್ಳಿ ಮತ್ತು ಶೋತ್ರಿಯತಲ್ಲೂಹಳ್ಳಿ ಗ್ರಾಮಗಳಲ್ಲಿ ಒಟ್ಟು 1777-02 ಎಕರೆ ಜಮೀನಿಗೆ ಕೆಐಎಡಿ ಕಾಯ್ದೆ ಕಲಂ 3(1), 1(3) ಹಾಗೂ 28(1)ರಡಿ ದಿನಾಂಕ:30-08-2021 ರಂದು ಪ್ರಾಥಮಿಕ ಅಧಿಸೂಚನೆ ಹೊರಡಿಸಿದ್ದು, ಈ ಪೈಕಿ ಮೊದಲನೇ ಹಂತದಲ್ಲಿ ಗೋಕರೆಬಚೇನಹಳ್ಳಿ ಹಾಗೂ ಹ್ಯಾಡಾಳ ಗ್ರಾಮಗಳಲ್ಲಿ ಒಟ್ಟು 439-32 ಎಕರೆ ಜಮೀನಿಗೆ ದಿನಾಂಕ:28-06-2024ರಂದು ಹಾಗೂ ಎರಡನೇ ಹಂತದಲ್ಲಿ ಪಾಳ್ಯ, ಹರಳೂರು, ಪೋಲನಹಳ್ಳಿ, ನಲ್ಲೂರು, ಮಲ್ಲೇಪುರ, ನಲ್ಲಪ್ಪನಹಳ್ಳಿ, ಚೀ.ಮಾಚನಹಳ್ಳಿ ಮತ್ತು ಮುದ್ದೇನಹಳ್ಳಿ ಗ್ರಾಮಗಳಲ್ಲಿನ ಜಮೀನನ್ನು ಅಂತಿಮವಾಗಿ ಸ್ವಾಧೀನಪಡಿಸಿಕೊಳ್ಳುವ ಬಗ್ಗೆ, ಒಟ್ಟು 841-26.12 ಎಕರೆ ಜಮೀನಿಗೆ ದಿನಾಂಕ:19-04-2025 ರಂದು ಕಲಂ 28(4)ರಡಿ ಅಂತಿಮ ಅಧಿಸೂಚನೆ ಹೊರಡಿಸಲಾಗಿರುತ್ತದೆ.<br><br>ಆದರೆ ಭೂಮಾಲೀಕರುಗಳು ಸದರಿ ಭೂಸ್ವಾಧೀನವನ್ನು ವಿರೋಧಿಸಿ ಸತತವಾಗಿ ಧರಣಿ ನಡೆಸಿ ತಮ್ಮ ಜಮೀನುಗಳನ್ನು ಕೈಬಿಡುವ ಬಗ್ಗೆ ಒತ್ತಾಯಿಸಿ ತದನಂತರದಲ್ಲಿ ದಿನಾಂಕ 15.07.2025 ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆ ನಡೆದು ಅಂತಿಮವಾಗಿ ಪ್ರಸ್ತಾವಿತ ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಬಿಡುವುದು ಎಂದು ತೀರ್ಮಾನಿಸಲಾಗಿರುತ್ತದೆ. |

| | | |
|---|---|---|
| | | ಅಲ್ಲದೇ, ಒಂದೊಮ್ಮೆ ಭೂಮಾಲೀಕರು ಸ್ವಯಂಪ್ರೇರಣೆಯಿಂದ ಭೂಸ್ವಾಧೀನಕ್ಕೆ ಒಪ್ಪಿ ಮುಂದೆ ಬಂದಲ್ಲಿ ಸದರಿಯವರ ಜಮೀನಿಗೆ ಉತ್ತಮ ಹಾಗೂ ನ್ಯಾಯಯುತವಾದ ಪರಿಹಾರ ನೀಡಲಾಗುವುದು ಹಾಗೂ ಭೂಪರಿಹಾರದ ಬದಲಿಗೆ ಅಭಿವೃದ್ಧಿಪಡಿಸಿದ ನಿವೇಶನವನ್ನು ಪಡೆಯಲು ಅಪೇಕ್ಷೆಪಟ್ಟಲ್ಲಿ ನಿಯಮಾನುಸಾರ ಹಂಚಿಕೆ ಮಾಡಲಾಗುವುದು ಎಂದು ತೀರ್ಮಾನಿಸಲಾಗಿರುತ್ತದೆ.<br><br>ಈ ಹಿನ್ನೆಲೆಯಲ್ಲಿ ಹ್ಯಾಡಾಳ & ಗೋಕರೆಬಚೇನಹಳ್ಳಿ ಗ್ರಾಮಗಳ ಅನೇಕ ಭೂಮಾಲೀಕರುಗಳು ಭೂಸ್ವಾಧೀನ ಪ್ರಕ್ರಿಯೆಯನ್ನು ಮುಂದುವರೆಸುವಂತೆ ತಮ್ಮ ಒಪ್ಪಿಗೆ ಪತ್ರವನ್ನು ಕಛೇರಿಗೆ ನೀಡುತ್ತಿದ್ದು, ಇದನ್ನು ಪರಿಶೀಲಿಸಲಾಗುತ್ತಿದೆ. |
| ಆ) | ಸುಮಾರು 1,777 ಎಕರೆ ಭೂಮಿಯ Hi-Tech Aerospace ಸ್ಥಾಪಿಸಲು ಜಮೀನು ಸ್ವಾಧೀನ ಪಡಿಸಿಕೊಳ್ಳಲು ಯೋಜಿಸಿದ್ದು, ಈಗ ಪ್ರಸ್ತಾವನೆಯನ್ನು ಕೈಬಿಡಲಾಗಿರುವುದರಿಂದ Hi-Tech Aerospace ಯೋಜನೆ ಇತರೆ ರಾಜ್ಯಕ್ಕೆ ಸ್ಥಳಾಂತರವಾಗದಂತೆ ನೋಡಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮವೇನು; | ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಸುತ್ತಮುತ್ತ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಸೇರಿದಂತೆ ರಾಜ್ಯದ ಬೇರೆ ಬೇರೆ ಜಿಲ್ಲೆಗಳಲ್ಲಿ ಸಾಕಷ್ಟು ಕೈಗಾರಿಕಾ ಪ್ರದೇಶಗಳನ್ನು ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಗುರುತಿಸಿ ಸ್ವಾಧೀನಪಡಿಸಿ ಅಭಿವೃದ್ಧಿಪಡಿಸುತ್ತಿರುವ ಹಿನ್ನೆಲೆಯಲ್ಲಿ ಪ್ರಸ್ತಾವಿತ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ, ತಾಲ್ಲೂಕು, ಚನ್ನರಾಯಪಟ್ಟಣ ಹೋಬಳಿಯ ಭೂಸ್ವಾಧೀನದ ಬಗ್ಗೆ ಕೈಗೊಂಡಿರುವ ತೀರ್ಮಾನದಿಂದ ನಮ್ಮ ನೆರೆಯ ರಾಜ್ಯಗಳು ಯಾವುದೇ ಲಾಭವನ್ನು ಪಡೆಯಲು ಅವಕಾಶವಿರುವುದಿಲ್ಲ, ಹಾಗೂ ಈ ಯೋಜನೆ ಬೇರೆ ರಾಜ್ಯಕ್ಕೆ ಸ್ಥಳಾಂತರಗೊಳ್ಳುವುದಿಲ್ಲ. |
| ಇ) | ಸದರಿ ಪ್ರಸ್ತಾಪಿತ ಈ ಯೋಜನೆಯನ್ನು ಸ್ಥಾಪಿಸಲು ಇತರೆ ಜಾಗವನ್ನು ಗುರುತಿಸಲಾಗಿದೆಯೇ; (ವಿವರಗಳನ್ನು ನೀಡುವುದು) | |

**ಸಂಖ್ಯೆ: ಸಿಐ 445 ಐಎಪಿ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು